# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1040(1103)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಆರೋಗ್ಯ ಇಲಾಖೆಯ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

(ಅ) ರಾಜ್ಯದಲ್ಲಿರುವ ಒಟ್ಟು ಆರೋಗ್ಯ ಕೇಂದ್ರಗಳೆಷ್ಟು; (ವಿವರ ನೀಡುವುದು)

(ಆ) ಈ ಆಸ್ಪತ್ರೆಗಳಲ್ಲಿ ಮಂಜೂರಾದ ಒಟ್ಟು ಖಾಯಂ ಹುದ್ದೆಗಳೆಷ್ಟು; ಅವುಗಳಲ್ಲಿ ಖಾಲಿ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಕೋವಿಡ್ ಸಂಕಷ್ಟದ ಕಾಲದಲ್ಲಿ ವೈದ್ಯರು, ವೈದ್ಯಕೀಯ ಸಿಬ್ಬಂದಿಗಳ ಕೊರತೆಯಿಂದಾಗಿ ರೋಗಿಗಳು ಹಾಗೂ ಸಿಬ್ಬಂದಿಗಳಿಗೆ ಸಂಕಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಖಾಯಂ ಹುದ್ದೆಗಳಿಗೆ ನೇಮಕಾತಿ ಮಾಡಲಾಗುವುದು ಯಾವಾಗ?